**ಕರ್ನಾಟಕ ಸರ್ಕಾರ ಶಾಲಾ ಶಿಕ್ಷಣ ಇಲಾಖೆ ಅಪರ ಆಯುಕ್ತರ ಕಛೇರಿ,**
**ಐವಾನ್–ಇ–ಷಾಹಿ ಬಡಾವಣೆ ಹತ್ತಿರ ಕಲಬುರಗಿ**

ಸಂಖ್ಯೆ: ಸಿ1(1) ಆಡಳಿತ ಪ್ರದಸ ಜೇಪಟ್ಟಿ/01/2025–26 ದಿನಾಂಕ: 18.06.2025

## ಅಧಿಸೂಚನೆ

ವಿಷಯ: ದಿನಾಂಕ: 01.01.2025 ರಲ್ಲಿದ್ದಂತೆ, ಶಾಲಾ ಶಿಕ್ಷಣ ಇಲಾಖೆಯ ಪ್ರಥಮ ದರ್ಜೆ ಸಹಾಯಕರು ಅಂತಿಮ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ: 1) ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇಸೇನಿ 2021 ದಿನಾಂಕ: 10/12/2021.
2) ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ: 08.04.2025

>><><><<

ಉಲ್ಲೇಖ(1) ಸರ್ಕಾರದ ಅಧಿಕೃತ ಜ್ಞಾಪನದನ್ವಯ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957ರ ನಿಯಮ 10ರಡಿ ಜೇಷ್ಠತಾ ಪಟ್ಟಿಗಳನ್ನು ಸಿದ್ದಪಡಿಸುವುದಕ್ಕೆ ಸಂಬಂಧಿಸಿದಂತೆ ಪರಿಷ್ಕೃತ ನಮೂನೆ ಅನುಬಂಧ–1 ಮತ್ತು ಅನುಬಂಧ–2ನ್ನು ಹೊರಡಿಸಲಾಗಿದ್ದು, ಇನ್ನು ಮುಂದೆ ಈ ಪರಿಷ್ಕೃತ ನಮೂನೆಗಳಲ್ಲಿ ಜೇಷ್ಟತಾ ಪಟ್ಟಿಗಳನ್ನು ಪ್ರಕಟಿಸಲು ತಿಳಿಸಲಾಗಿರುತ್ತದೆ.

ಅದರಂತೆ, ದಿನಾಂಕ: 01.01.2025 ರಲ್ಲಿದ್ದಂತೆ ಶಾಲಾ ಶಿಕ್ಷಣ ಇಲಾಖೆಯ ಪ್ರಥಮ ದರ್ಜೆ ಸಹಾಯಕರ ಪ್ರಾರಂಭದ ಮೂಲ ವೃಂದ, ಸ್ಥಳೀಯ ವೃಂದ ಹಾಗೂ ಉಳಿದ ಮೂಲ ವೃಂದದ ಪ್ರತ್ಯೇಕವಾದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ತಯಾರಿಸಿ, ಸದರಿ ಜೇಷ್ಠತಾ ಪಟ್ಟಿಯಲ್ಲಿ ಬಾಧಿತರಾಗಬಹುದಾದಂತಹ, ನೌಕರರಿಗೆ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ತಮ್ಮ ಆಕ್ಷೇಪಣೆಗಳಿದ್ದಲ್ಲಿ, ಅದನ್ನು ಸಮರ್ಥಿಸುವಂತಹ ಸೂಕ್ತ ದಾಖಲೆಗಳೊಂದಿಗೆ ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರ ಮುಖಾಂತರ ಈ ಕಛೇರಿಗೆ ಸಲ್ಲಿಸಲು ಹಾಗೂ ನಿಗಧಿತ ಅವಧಿ ಮುಗಿದ ನಂತರ ಬಂದಂತಹ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ತಿಳಿಸಿ, ಉಲ್ಲೇಖ(2)ರ ಅಧಿಸೂಚನೆ ರನ್ವಯ ಇಲಾಖೆಯ ವೆಬ್‌ಸೈಟ್ www.cpikalaburgi.karnataka.gov.in ರಲ್ಲಿ ಪ್ರಕಟಿಸಲಾಗಿರುತ್ತದೆ.

ಅದರಂತೆ, ವಿಭಾಗದ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಂದ ಈ ಕಛೇರಿಗೆ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಲಾಗಿದೆ. ಪ್ರಯುಕ್ತ, ದಿನಾಂಕ: 01.01.2025 ರಲ್ಲಿದ್ದಂತೆ ಶಾಲಾ ಶಿಕ್ಷಣ ಇಲಾಖೆಯ ಪ್ರಥಮ ದರ್ಜೆ ಸಹಾಯಕರ ಪ್ರಾರಂಭದ ಮೂಲ ವೃಂದ, ಸ್ಥಳಿಯ ವೃಂದ ಹಾಗೂ ಉಳಿದ ಮೂಲ ವೃಂದದ ಪ್ರತ್ಯೇಕವಾದ ಅಂತಿಮ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ತಯಾರಿಸಿ, ಈ ಅಧಿಸೂಚನೆಯೊಂದಿಗೆ ಲಗತ್ತಿಸಲಾದ ಅನುಬಂಧಗಳಲ್ಲಿ ಇಲಾಖೆಯ ವೆಬ್‌ಸೈಟ್ www.cpikalaburgi.karnataka.gov.in ರಲ್ಲಿ ಪ್ರಕಟಿಸಲಾಗಿದೆ.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

Digitally signed by
A HANUMAKKA
Date: 19-06-2025
11:55:59

ಸಹ ನಿರ್ದೇಶಕರು (ಆಡಳಿತ)
**ಅಪರ ಆಯುಕ್ತರ ಪರವಾಗಿ**

ಪ್ರತಿಗಳನ್ನು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
3) ಪ್ರಾಂಶುಪಾಲರು, ಸರ್ಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ, ಕಲಬುರಗಿ.
4) ಈ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಉಪ ನಿರ್ದೇಶಕರು (ಆಡಳಿತ).
5) ಈ ವಿಭಾಗದ ಎಲ್ಲಾ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಪ್ರಾಂಶುಪಾಲರುಗಳಿಗೆ.
6) ಈ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
7) ನೋಡಲ್ ಅಧಿಕಾರಿಗಳು, ಇ–ಆಡಳಿತ ಶಾಖೆ, ಆಯುಕ್ತರ ಕಛೇರಿ, ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
8) ಕಛೇರಿ ಪ್ರತಿ.